ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಸೋಮವಾರ ೪ನೇ ಜನವರಿ ೧೯೯೩, ಪುಷ್ಯ ೧೪, ಶಕ ೧೯೧೪

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ ೧೧.೦೫ ಗಂಟೆಗೆ ಸಮಾವೇಶಗೊಂಡಿತು.

ಉಪಾಧ್ಯಕ್ಷರು: **(ಶ್ರೀಮತಿ ನಾಗಮ್ಮ ಕೇಶವಮೂರ್ತಿ)** ಅವರು ಪೀಠವನ್ನು

ಅಲಂಕರಿಸಿದರು.

ಶ್ರೀ ಪಿ.ಸಿ. ಸಿದ್ದನಗೌಡರ್ : ಸನ್ಮಾನ್ಯ ಉಪಾಧ್ಯಕ್ಷರಿಗೆ ಹೊಸ ವರ್ಷದ ಶುಭಾಶಯಗಳು.

ಶ್ರೀ ವಾಟಾಳ್ ನಾಗರಾಜ್ : ಸನ್ಮಾನ್ಯ ಉಪಾಧ್ಯಕ್ಷರಿಗೆ, ಸ್ನೇಹಿತರಿಗೆ, ಸದಸ್ಯರಿಗೆ ಹೊಸ ವರ್ಷದ ಶುಭಾಶಯಗಳು.

ಉಪಾಧ್ಯಕ್ಷರು : ನಿಮಗೆಲ್ಲರಿಗೂ ಹೊಸ ವರ್ಷದ ಶುಭಾಶಯಗಳು.

ಶ್ರೀ ಆರ್.ವಿ. ದೇಶಪಾಂಡೆ : ತಮಗೆ ಹೊಸ ವರ್ಷದ ಶುಭಾಶಯಗಳನ್ನರ್ಪಿಸುತ್ತೇನೆ.

ಉಪಾಧ್ಯಕ್ಷರು : ವಂದನೆಗಳು.

ಸಂತಾಪ ಸೂಚನೆ

ಉಪಾಧ್ಯಕ್ಷರು : ಪ್ರಜಾಪ್ರತಿನಿಧಿ ಸಭೆಯ ಸದಸ್ಯರೂ ಹಾಗೂ ವಿಧಾನ ಸಭೆಯ ಮಾಜಿ ಸದಸ್ಯರೂ ಆಗಿದ್ದ ಶ್ರೀ ಬಿ. ನಾರಾಯಣಸ್ವಾಮಪ್ಪನವರು ದಿನಾಂಕ : 30-12-92ರಂದು ನಿಧನರಾದರು.

ವೃತ್ತಿಯಲ್ಲಿ ಕೃಷಿಕರಾಗಿದ್ದ ಶ್ರೀಯುತರು, 1941 ರಿಂದ 1945 ಹಾಗೂ 1945 ರಿಂದ 1949ರ ಅವಧಿಯಲ್ಲಿ ಪ್ರಜಾಪ್ರತಿನಿಧಿ ಸಭೆಯ ಸದಸ್ಯರಾಗಿ, 1967-71ರ ಅವಧಿಯಲ್ಲಿ ನಾಲ್ಕನೇ ವಿಧಾನಸಭೆಯ ಸದಸ್ಯರಾಗಿ, ಯಲಹಂಕ ಕ್ಷೇತ್ರವನ್ನು ಪ್ರತಿನಿಧಿಸಿ, ಸೇವೆ ಸಲ್ಲಿಸುವುದರ ಜೊತೆಗೆ, ಬೆಂಗಳೂರು ಜಿಲ್ಲಾಮಂಡಳಿ, ತಾಲ್ಲೂಕು ಅಭಿವೃದ್ಧಿ ಮಂಡಳಿಯು ಸದಸ್ಯರಾಗಿ ಹಾಗೂ ಗ್ರಾಮೀಣ ಕೈಗಾರಿಕಾ ಸಂಘದ ಅಧ್ಯಕ್ಷರಾಗಿ, ಸಮಾಜದ ಸರ್ವತೋಮುಖ ಅಭಿವೃದ್ಧಿಗಾಗಿ ಸೇವೆ ಸಲ್ಲಿಸಿದ ಕೀರ್ತಿ ಶ್ರೀಯುತರದ್ದಾಗಿರುತ್ತದೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಒಂದು ನಿಮಿಷ ಎದ್ದು ನಿಂತು ಮೌನವನ್ನಾಚಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಹಾಗೂ ಅವರ ಗೌರವಾರ್ಥ ಮಾನ್ಯ ಸದಸ್ಯರೆಲ್ಲರೂ ಒಂದು ನಿಮಿಷ ಎದ್ದು ನಿಂತು ಮೌನವನ್ನಾಚರಿಸಿದರು)

ಈ ಸಂತಾಪ ಸೂಚಕ ನಿರ್ಣಯವನ್ನು ಅವರ ಮನೆಯವರಿಗೆ ಕಳುಹಿಸಿಕೊಡಲಾಗುವುದು.

ಉಪಾಧ್ಯಕ್ಷರು : ಪ್ರಶ್ನೆ 102(614), ಇದು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮಂತ್ರಿಗಳಿಗೆ ಕಳುಹಿಸಿದ್ದರು. ಅದನ್ನು ಈಗ ಬೇರೆ ಮಂತ್ರಿಗಳಿಗೆ ಟ್ರಾನ್ಸ್‌ಫರ್ ಮಾಡಿದ್ದಾರೆ. ಇದಕ್ಕೆ ಇನ್ನು ಉತ್ತರ ಬಂದಿಲ್ಲ ಮುಂದೆ ಇದನ್ನು ತೆಗೆದುಕೊಳ್ಳೋಣ.

ಶ್ರೀ ಬಿ. ಶಿವರಾಮು : ಇದು ಲೋಕೋಪಯೋಗಿ ಇಲಾಖೆಗೆ ಸಂಬಂಧಪಟ್ಟಿರತಕ್ಕಂಥ ಪ್ರಶ್ನೆ ಇಲ್ಲ, ಲೋಕೋಪಯೋಗಿ ಇಲಾಖೆಗೆ ಏತಕ್ಕೆ ಹೋಗುತ್ತದೆಯೋ ಗೊತ್ತಿಲ್ಲ.

ಶ್ರೀ ಎಂ.ವೈ. ಘೋರ್ಪಡೆ : ಅಧ್ಯಕ್ಷರೆ, ಈ ಪ್ರಶ್ನೆ ನಮ್ಮ ಕಡೆ ಇಲ್ಲ.

ಶ್ರೀ ಬಿ. ಶಿವರಾಮು : ಮಾನ್ಯ ಅಧ್ಯಕ್ಷರೆ, ಸದನದಲ್ಲಿ ನನ್ನ ಪ್ರಶ್ನೆಗೆ ಉತ್ತರ ಕೊಡಿಸಬೇಕು.

MADAM DEPUTY SPEAKER : We will take it up later after the answer is received.

SRI. B. SHIVARAMU : This week please.

ಮಂಡಲ್ ಪಂಚಾಯತ್ ಹಾಗೂ ಜಿಲ್ಲಾ ಪರಿಷತ್ತುಗಳಿಗೆ ಚುನಾವಣೆ

636 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮಂಡಲ ಪಂಚಾಯತ್ ಮತ್ತು ಜಿಲ್ಲಾ ಪರಿಷತ್ ಚುನಾವಣೆಗಳನ್ನು ನಡೆಸಲು ಸರ್ಕಾರಕ್ಕೆ ಸುಪ್ರೀಮ್ ಕೋರ್ಟ್‌ನಿಂದ ಆದೇಶ ಬಂದಿದೆಯೇ?

ಆ) ಬಂದಿದ್ದಲ್ಲಿ, ಆದೇಶದ ಪ್ರಕಾರ ಚುನಾವಣೆಗಳನ್ನು ನಡೆಸಲಾಗುವುದೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಹೌದು.

ಆ) ಇದನ್ನು ಸರಕಾರ ಪರಿಶೀಲಿಸುತ್ತಿದೆ.

ಶ್ರೀ ಪಿ.ಜಿ.ಆರ್. ಸಿಂಧ್ಯ : ಮಾನ್ಯ ಉಪಾಧ್ಯಕ್ಷಿಣಿಯವರೆ, ಸನ್ಮಾನ್ಯ ಮಂತ್ರಿಗಳು ಕೊಟ್ಟಿರತಕ್ಕಂತಹ ಉತ್ತರದಿಂದ ಎರಡು ಉಪಪ್ರಶ್ನೆಗಳು ಉದ್ಭವ ಆಗುತ್ತದೆ. ಒಂದು ರಾಜ್ಯದಲ್ಲಿ ಮಂಡಲ್ ಪಂಚಾಯತ್ ಮತ್ತು ಜಿಲ್ಲಾಪರಿಷತ್ತು ಚುನಾವಣೆಗಳನ್ನು ನಡೆಸಲಿಕ್ಕೆ ಸುಪ್ರೀಂ ಕೋರ್ಟ್‌ನಿಂದ ಆದೇಶ ಬಂದಿದೆ ಎನ್ನತಕ್ಕಂತ ಮಾತನ್ನು ಹೇಳಿದ್ದಾರೆ. ಹಾಗಾದರೆ ಆ ಆದೇಶದ ಖಚಿತವಾದ ವಿವರಗಳು ಏನು ಎಂಬುದು ಒಂದು. ಎರಡನೆಯದಾಗಿ ಇತ್ತೀಚೆಗೆ ಕೇಂದ್ರ ಸರ್ಕಾರ ಮಾಡಿರತಕ್ಕಂತಹ ಸಂವಿಧಾನದ 73ನೆ ತಿದ್ದುಪಡಿ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ನಿಲುವು ಏನು? ಮಾನ್ಯ ಮಂತ್ರಿಗಳು ಇದನ್ನು ಪರಿಶೀಲನೆ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಮಾನ್ಯ ಘೋರ್ಪಡೆಯವರಿಂದ ಇದನ್ನು ನಾನು ನಿರೀಕ್ಷೆ